ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**
**GSTIN : 29AAALB0060D1ZS**

ಸಂಖ್ಯೆ : ಬೆಂಅಪ್ರಾ/ನಯೋಸ/DLP-42/2022-23/ 1438 /2023-24. ದಿನಾಂಕ : 29/09/2023
No. C.No. 189368 Date :

# ಕಾರ್ಯಾದೇಶ

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2 ರಲ್ಲಿ 2ಎ-35ಗುಂ, ಸರ್ವೆ ನಂ. 24/3 ರಲ್ಲಿ 2ಎ-00ಗುಂ, ಸರ್ವೆ ನಂ. 24/4 ರಲ್ಲಿ 1ಎ-30ಗುಂ ಮತ್ತು ಸರ್ವೆ ನಂ. 66/2 ರಲ್ಲಿ 3ಎ-24.50ಗುಂ ಒಟ್ಟು 10ಎ-09.50ಗುಂ (0-13ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು M/s. Birla Estates Pvt Ltd ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ
1. ಅರ್ಜಿದಾರರ ಮನವಿ ದಿನಾಂಕ 23.01.2023.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 3.4.6/2023, ದಿನಾಂಕ 20.03.2023.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-42/2022-23/217/2023-24, ದಿನಾಂಕ 25.04.2023.
4. ಕೆನರಾ ಬ್ಯಾಂಕ್ ಚಲನ್ ನಂ. GN2305694, ದಿನಾಂಕ 03.05.2023.
5. ಈ ಕಛೇರಿಯ ಅನೌಪಚಾರಿಕ ಟಿಪ್ಪಣಿಯ ಪತ್ರದ ಸಂಖ್ಯೆ: ಬೆಂಅಪ್ರಾ/ನಯೋಸ/DLP-42/2022-23/695/2023-24, ದಿನಾಂಕ 30/06/2023.
6. ಅಧಿಕ ಜಿಲ್ಲಾ ನೊಂದಣಾಧಿಕಾರಿಗಳು, ಬೆಂಅಪ್ರಾ ರವರ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ ಪರಿತ್ಯಾಜನಾ ಪತ್ರ ಸಂಖ್ಯೆ BDA-1-01253-2023-24, ದಿನಾಂಕ 05.08.2023.

ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2 ರಲ್ಲಿ 2ಎ-35ಗುಂ, ಸರ್ವೆ ನಂ. 24/3 ರಲ್ಲಿ 2ಎ-00ಗುಂ, ಸರ್ವೆ ನಂ. 24/4 ರಲ್ಲಿ 1ಎ-30ಗುಂ ಮತ್ತು ಸರ್ವೆ ನಂ. 66/2 ರಲ್ಲಿ 3ಎ-24.50ಗುಂ ಒಟ್ಟು 10ಎ-09.50ಗುಂ (0-13ಗುಂಟೆ ಖರಾಬು ಹೊರತುಪಡಿಸಿ) ಜಮೀನುಗಳಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಅನುಮೋದಿಸಿಕೊಡುವಂತೆ ಜಮೀನಿನ ಮಾಲೀಕರ ಪರವಾಗಿ ಜಿಪಿಎದಾರರಾದ M/s. Birla Estates Pvt Ltd ರವರು ಉಲ್ಲೇಖ [1] ರಂತೆ ಕೋರಿರುತ್ತಾರೆ.

ಉಲ್ಲೇಖ [2] ರಂತೆ ದಿನಾಂಕ 20.03.2023 ರಂದು ನಡೆದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 3.4.6/2023 ರಲ್ಲಿ ಮಂಡಿಸಿ ಚರ್ಚಿಸಲಾಗಿತ್ತು. ಚರ್ಚೆಯ ನಂತರ ಸಲ್ಲಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳಿಗೆ ಅನುಗುಣವಾಗಿದ್ದು, ನಾಲಾಗೆ ಅಡ್ಡವಾಗಿ ಸೇತುವೆ ನಿರ್ಮಿಸಲು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವ ಮತ್ತು ಸಾಮಾನ್ಯ ಷರತ್ತುಗಳಿಗೊಳಪಡಿಸಿ,

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2 ರಲ್ಲಿ 2ಎ-35ಗುಂ, ಸರ್ವೆ ನಂ. 24/3 ರಲ್ಲಿ 2ಎ-00ಗುಂ, ಸರ್ವೆ ನಂ. 24/4 ರಲ್ಲಿ 1ಎ-30ಗುಂ ಮತ್ತು ಸರ್ವೆ ನಂ. 66/2 ರಲ್ಲಿ 3ಎ-24.50ಗುಂ ಒಟ್ಟು 10ಎ-09.50ಗುಂ (0-13ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು M/s. Birla Estates Pvt Ltd ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2, 24/3, 24/4 ಮತ್ತು 66/2 ರಲ್ಲಿ ಒಟ್ಟು 10ಎ-09.50ಗುಂ [0-13 ಗುಂಟೆ ಖರಾಬು ಹೊರತುಪಡಿಸಿ] ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು.

ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ತೀರ್ಮಾನದಂತೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಉಲ್ಲೇಖ [3] ರ ಪತ್ರದಂತೆ ವಿವಿಧ ಶುಲ್ಕಗಳ ಬಾಬ್ತು ₹. 73,69,760/- [₹. ಎಪ್ಪತ್ತಮೂರು ಲಕ್ಷದ ಅರವತ್ತೊಂಭತ್ತು ಸಾವಿರದ ಏಳುನೂರ ಅರವತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ತಿಳಿಸಲಾಗಿತ್ತು.

ಉಲ್ಲೇಖ [4] ರನ್ವಯ ದಿನಾಂಕ 03.05.2023 ರಂದು ₹.73,69,760/- [₹. ಎಪ್ಪತ್ತಮೂರು ಲಕ್ಷದ ಅರವತ್ತೊಂಭತ್ತು ಸಾವಿರದ ಏಳುನೂರ ಅರವತ್ತು ಮಾತ್ರ] ಗಳನ್ನು ಪ್ರಾಧಿಕಾರದ ಕೆನರಾ ಬ್ಯಾಂಕ್ ನ ಚಲನ್ ನಂ. GN2305694 ರ ಮೂಲಕ ಪಾವತಿಸಿರುತ್ತಾರೆ. ಸದರಿ ಮೊತ್ತವು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 12.05.2023 ರಂದು ದೃಢೀಕರಿಸಿರುತ್ತಾರೆ.

ಉಲ್ಲೇಖ [5] ರಂತೆ ಕರಡು ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ & ರಸ್ತೆ ವಿಸ್ತರಣಾ ಪ್ರದೇಶಗಳನ್ನು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು , ದಕ್ಷಿಣ ವಿಭಾಗ ಇವರಿಗೂ ಮತ್ತು ಸದರಿ ಪ್ರದೇಶಗಳನ್ನು ಹಸ್ತಾಂತರಿಸುವಂತೆ ಅರ್ಜಿದಾರರಿಗೆ ತಿಳಿಸಲಾಗಿತ್ತು.

ಉಲ್ಲೇಖ [6] ರಂತೆ ಕಾರ್ಯಪಾಲಕ ಅಭಿಯಂತರರು [ದಕ್ಷಿಣ ವಿಭಾಗ] ಇವರು ಪ್ರಾಧಿಕಾರಕ್ಕೆ ಹಸ್ತಾಂತರಿಸಬೇಕಾಗಿರುವ ಉದ್ಯಾನವನ / ಬಯಲುಜಾಗ & ರಸ್ತೆ ವಿಸ್ತರಣಾ ಪ್ರದೇಶಗಳನ್ನು ದಿನಾಂಕ 05.08.2023 ರಂದು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ಕೊಂಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2 ರಲ್ಲಿ 2ಎ-35ಗುಂ, ಸರ್ವೆ ನಂ. 24/3 ರಲ್ಲಿ 2ಎ-00ಗುಂ, ಸರ್ವೆ ನಂ. 24/4 ರಲ್ಲಿ 1ಎ-30ಗುಂ ಮತ್ತು ಸರ್ವೆ ನಂ. 66/2 ರಲ್ಲಿ 3ಎ-24.50ಗುಂ ಒಟ್ಟು 10ಎ-09.50ಗುಂ (0-13ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದಿಸಲಾಗಿದೆ.

| | |
|---|---|
| 1 | ಪ್ರಾಧಿಕಾರವು ಅನುಮೋದಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2 ರಲ್ಲಿ 2ಎ-35ಗುಂ, ಸರ್ವೆ ನಂ. 24/3 ರಲ್ಲಿ 2ಎ-00ಗುಂ, ಸರ್ವೆ ನಂ. 24/4 ರಲ್ಲಿ 1ಎ-30ಗುಂ ಮತ್ತು ಸರ್ವೆ ನಂ. 66/2 ರಲ್ಲಿ 3ಎ-24.50ಗುಂ ಒಟ್ಟು 10ಎ-09.50ಗುಂ (0-13ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು M/s. Birla Estates Pvt Ltd ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 2 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ವಿವಿದ ಜಾತಿಯ ಮರಗಿಡಗಳನ್ನು ಬೆಳಸಿ ಅಭಿವೃದ್ಧಿ ಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 3 | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ತೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ತೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 4 | ವಸತಿ ಅಭಿವೃದ್ಧಿ ಯೋಜನೆ ನಕ್ಷೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ / ಬಯಲುಜಾಗದ ಪ್ರದೇಶವು ಸೇರಿದಂತೆ ಹಾಗೂ ವಸತಿ ಅಭಿವೃದ್ಧಿ ಯೋಜನಾ ಪ್ರದೇಶದಲ್ಲಿ 240.0 ಚ.ಮೀ FAR ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. |
| 5 | ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ಪರಿಶೀಲಿಸಿಕೊಳ್ಳತಕ್ಕದ್ದು. ಸಿವಿಲ್ ಕಾಮಗಾರಿ ಮತ್ತು ಕಟ್ಟಡ ಕಾಮಾಗಾರಿಗೆ BWSSB ಯಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಪಡೆದು ಉಪಯೋಗಿಸಿಕೊಳ್ಳತಕ್ಕದ್ದು. |
| 6 | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ / ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 7 | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿ ನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ಸದರಿ ಕಟ್ಟಡ ನಿರ್ಮಾಣ ಸಂಬಂಧಿಸಿದಂತೆ ಅವಶ್ಯವಿರುವ ವಿವಿಧ ಇಲಾಖೆಗಳಿಂದ ಅಗತ್ಯ NOC ಗಳನ್ನು ಮತ್ತು ಇನ್ನಿತರೇ ಮಾಹಿತಿಗಳನ್ನು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 8 | ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿ ಅನುಮೋದನೆ ಪಡೆದಿದ್ದು ದೃಢಪಟ್ಟಲ್ಲಿ ಮತ್ತು ಮಾಲೀಕತ್ವದ ಬಗ್ಗೆ ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯನ್ನು ರದ್ದುಗೊಳಿಸುವ ಅಥವಾ ಹಿಂಪಡೆಯುವ ಅಧಿಕಾರವನ್ನು ಕೆಟಿಸಿಪಿ ಕಾಯ್ದೆ ಕಲಂ 76 (O) ರಡಿಯಲ್ಲಿ ಪ್ರಾಧಿಕಾರದ ಆಯುಕ್ತರು ಅಧಿಕಾರ ಹೊಂದಿದ್ದು, ಅದರಂತೆ ಕ್ರಮ ಜರುಗಿಸಲಾಗುವುದು. |

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2 ರಲ್ಲಿ 2ಎ-35ಗುಂ, ಸರ್ವೆ ನಂ. 24/3 ರಲ್ಲಿ 2ಎ-00ಗುಂ, ಸರ್ವೆ ನಂ. 24/4 ರಲ್ಲಿ 1ಎ-30ಗುಂ ಮತ್ತು ಸರ್ವೆ ನಂ. 66/2 ರಲ್ಲಿ 3ಎ-24.50ಗುಂ ಒಟ್ಟು 10ಎ-09.50ಗುಂ (0-13ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು M/s. Birla Estates Pvt Ltd ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 9 | ವಸತಿ ಅಭಿವೃದ್ಧಿ ಯೋಜನೆಯಲ್ಲಿನ ವಸತಿ ಘಟಕಗಳಿಂದ ಉತ್ಪತ್ತಿಯಾಗುವ ಘನತ್ಯಾಜ್ಯಗಳ ವಿಂಗಡಣೆ ಮತ್ತು ಶೇಖರಣೆಗಾಗಿ ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 10 | ಪ್ರಶ್ನಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಮಳೆ ನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 11 | ಪ್ರಶ್ನಿತ ಜಮೀನನ್ನು ಅಭಿವೃದ್ಧಿ ಪಡಿಸುವ ಸಂದರ್ಭದಲ್ಲಿ BESCOM ನಿರ್ದೇಶನದಂತೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |
| 12 | ಪ್ರಶ್ನಿತ ಪ್ರದೇಶದಲ್ಲಿರುವ ನಾಲಾಗೆ ಅಡ್ಡವಾಗಿ ಸೇತುವೆ ನಿರ್ಮಿಸಲು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ನಿರ್ಮಿಸುವುದು. |
| 13 | ನಾಲಾ ಬಫರ್ ಗಾಗಿ ಕಾಯ್ದಿರಿಸಿರುವ ಪ್ರದೇಶವನ್ನು ಸ್ಥಳೀಯ ಸಂಸ್ಥೆ ಅಥವಾ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇತರೆ ಸರ್ಕಾರಿ ಅಥವಾ ಸರ್ಕಾರೇತರ ಸಂಸ್ಥೆಗಳಿಂದ Storm Water Drain ಅಥವಾ ಒಳಚರಂಡಿ ವ್ಯವಸ್ಥೆಗಳು ಹಾಗೂ ರಸ್ತೆಯನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಮುಫತ್ತಾಗಿ ಸಾರ್ವಜನಿಕ ಉಪಯೋಗಕ್ಕಾಗಿ ನೊಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸತಕ್ಕದ್ದು. |
| 14 | ರೆವಿನ್ಯೂ ದಾಖಲೆಗಳ / ಜಮೀನಿನ ಮಾಲೀಕತ್ವದ ದಾಖಲೆಗಳ ಸಂಬಂಧ ಯಾವುದೇ ನ್ಯಾಯಾಲಯದಲ್ಲಿ ಲೋಕಾಯುಕ್ತದಲ್ಲಾಗಲೀ ಯಾವುದೇ ಪ್ರಕರಣ ಇರುವುದಿಲ್ಲವೆಂದು ಸಲ್ಲಿಸಿರುವ ನೋಟರೈಸ್ಡ್ ಪ್ರಮಾಣ ಪತ್ರಕ್ಕೆ ಬದ್ಧರಾಗಿರತಕ್ಕದ್ದು . ಪ್ರಾಧಿಕಾರವು ಈ ಬಗ್ಗೆ ಜವಾಬ್ದಾರಿಯಾಗುವುದಿಲ್ಲ. |
| 15 | ವಸತಿ ಯೋಜನೆಯಲ್ಲಿನ ವಸತಿ ಘಟಕಗಳಿಗೆ ಕುಡಿಯುವ ನೀರಿಗಾಗಿ ಮತ್ತು ಇತರೆ ಉಪಯೋಗದ ನೀರಿಗಾಗಿ ಪ್ರತ್ಯೇಕವಾದ ಕೊಳಾಯಿ ವ್ಯವಸ್ಥೆಯನ್ನು (Duel piping System) ಮಾಡತಕ್ಕದ್ದು. ವಸತಿ ಘಟಕಗಳಿಂದ ಬರುವ ಕೊಳಚೆ ನೀರನ್ನು ಸಂಸ್ಕರಣೆ ಮಾಡಲು ಯೋಜನೆಯಲ್ಲಿ ಸಂಸ್ಕರಣಾ ಘಟಕ ಸ್ಥಾಪಿಸಿ, ಸಂಸ್ಕರಿಸಿದ ನೀರನ್ನು ಇತರೆ ಉಪಯೋಗಗಳಿಗಾಗಿ ಉಪಯೋಗಿಸತಕ್ಕದ್ದು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. |
| 16 | BWSSB,BESCOM, KSPCB, ವಾಯುಯಾನ ಪ್ರಾಧಿಕಾರ ,ಅಗ್ನಿಶಾಮಕ ಇಲಾಖೆ ಗಳಿಂದ NOC ಪಡೆದು ಕಟ್ಟಡ ನಕ್ಷೆ ಅನುಮೋದನೆ ಮೊದಲು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕಿರುತ್ತದೆ. ಕಟ್ಟಡ ನಕ್ಷೆ ಅನುಮತಿ ನೀಡುವ ಸಕ್ಷಮ ಪ್ರಾಧಿಕಾರವು ಅವುಗಳನ್ನು ಪರಿಸೀಲಿಸಿಕೊಳ್ಳತಕ್ಕದ್ದು. |
| 17 | ಸದರಿ ವಸತಿ ಅಭಿವೃದ್ಧಿ ಯೋಜನೆಯಲ್ಲಿ ಪ್ರಾಧಿಕಾರದ ದಿನಾಂಕ 08.11.2010 ರ ಸುತ್ತೋಲೆಯಂತೆ ಒಟ್ಟು ವಸತಿ ಘಟಕಗಳ ಶೇ 10.ರಷ್ಟು ವಸತಿ ಘಟಕಗಳನ್ನು (EWS) ಆರ್ಥಿಕ ಹಿಂದುಳಿದ ವರ್ಗದವರಿಗಾಗಿ ಮತ್ತು (LIG) ಕಡಿಮೆ ಆದಾಯ ವರ್ಗದವರಿಗಾಗಿ ಕಾಯ್ದಿರಿಸಲಾಗಿದೆ . |

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2 ರಲ್ಲಿ 2ಎ-35ಗುಂ, ಸರ್ವೆ ನಂ. 24/3 ರಲ್ಲಿ 2ಎ-00ಗುಂ, ಸರ್ವೆ ನಂ. 24/4 ರಲ್ಲಿ 1ಎ-30ಗುಂ ಮತ್ತು ಸರ್ವೆ ನಂ. 66/2 ರಲ್ಲಿ 3ಎ-24.50ಗುಂ ಒಟ್ಟು 10ಎ-09.50ಗುಂ (0-13ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು M/s. Birla Estates Pvt Ltd ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 18 | ಪ್ರಶ್ನಿತ ಪ್ರದೇಶದಲ್ಲಿ ಹಾದು ಹೋಗುವ ಹಳ್ಳ ಕೊಳ್ಳಗಳ ನೀರಿನ ಹರಿವಿಗೆ ಅಡಚಣೆ ಉಂಟು ಮಾಡದೆ ಸರಾಗವಾಗಿ ಹಾದು ಹೋಗುವಂತೆ ಅಭಿವೃದ್ಧಿ ಪಡಿಸುವುದು. |
| 19 | ರೇರಾ ಅಧಿನಿಯಮ, 2016 ಹಾಗೂ ಸಂಬಂದಿತ ನಿಯಮಗಳು, 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೋಂದಣಿ ಮಾಡಿಸುವುದು. |
| 20 | ಸ್ವಾಭಾವಿಕವಾಗಿ ಇಳಿಮಟ್ಟದ ಕಡೆ ಹೋಗುವ ಮಳೆನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಮಾಡುವುದು. |
| 21 | ಕಟ್ಟಡ ನಕ್ಷೆ ಅನುಮೋದನೆ ಸಮಯದಲ್ಲಿ ತಳಮಹಡಿ ಅಗತ್ಯತೆ ಬಗ್ಗೆ Water table ನ ವರದಿ ಪಡೆದು ಅದಕ್ಕನುಗುಣವಾಗಿ ಕ್ರಮ ಜರುಗಿಸುವುದು. |
| 22 | ಬಫರ್ ಪ್ರದೇಶದಲ್ಲಿ ಗಿಡಮರಗಳನ್ನು ಬೆಳಸತಕ್ಕದ್ದು. |
| 23 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ದರಾಗಿರುವುದು. |

Housiey.com

ಮೇಲ್ಕಂಡ ಷರತ್ತುಗಳಿಗೊಳಪಡಿಸಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸರ್ವೆ ನಂ. 24/2 ರಲ್ಲಿ 2ಎ-35ಗುಂ, ಸರ್ವೆ ನಂ. 24/3 ರಲ್ಲಿ 2ಎ-00ಗುಂ, ಸರ್ವೆ ನಂ. 24/4 ರಲ್ಲಿ 1ಎ-30ಗುಂ ಮತ್ತು ಸರ್ವೆ ನಂ. 66/2 ರಲ್ಲಿ 3ಎ-24.50ಗುಂ ಒಟ್ಟು 10ಎ-09.50ಗುಂ (0-13ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ಆಯುಕ್ತರು,
ಬೆಂಅಪ್ರಾ, ಬೆಂಗಳೂರು

ಇವರಿಗೆ,

M/S. Birla Estates Pvt. Ltd.,
Office No. G2, Pride Elite, 10,
Museum Road,
Bangalore 560 001.